# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1722 (2069)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಮುಜರಾಯಿ ಇಲಾಖೆಗಳಿಗೊಳಪಡುವ ದೇವಸ್ಥಾನಗಳಲ್ಲಿ ಮೂಲ ವ್ಯವಸ್ಥೆ ಕಲ್ಪಿಸುವ ಬಗ್ಗೆ

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಿಂದ ಕೋಟ್ಯಾಂತರ ರೂಪಾಯಿ ಆದಾಯ ಸರ್ಕಾರಕ್ಕೆ ಸಂದಾಯ ವಾಗುತ್ತಿದ್ದರೂ ಕೂಡ ಆ ದೇವಸ್ಥಾನಗಳಿಗೆ ಮೂಲ ಸೌಲಭ್ಯ ಕಲ್ಪಿಸುವಲ್ಲಿ ವಿಳಂಭ ದೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳು ಎಷ್ಟು; ಅವು ಯಾವುವು ; ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ದೇವಸ್ಥಾನಗಳು ಈ ಇಲಾಖೆಗೆ ಒಳಪಡುತ್ತವೆ;

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎ,ಬಿ,ಸಿ ದೇವಸ್ಥಾನಗಳಿಂದ ಸರ್ಕಾರಕ್ಕೆ ಯಾವ್ಯಾವ ದೇವಸ್ಥಾನಗಳಿಂದ ಎಷ್ಟೆಷ್ಟು ಆದಾಯ ಬಂದಿದೆ ; ಅದರಲ್ಲಿ ಬೆಳಗಾವಿ ಜಿಲ್ಲೆಯ ಯಾವ್ಯಾವ ದೇವಸ್ಥಾನಗಳಿಂದ ಎಷ್ಟು ಆದಾಯ ಬಂದಿರುತ್ತದೆ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಯಾವ್ಯಾವ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಬಳಕೆಯಾಗದೇ ಇರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಉ) ಹಿಂದೂ ದೇವಾಲಯಗಳನ್ನು ಸರ್ಕಾರ ಮೇಲ್ವಿಚಾರಣೆ ಮಾಡುವಂತೆ ಮಸೀದಿಗಳನ್ನು, ಚರ್ಚ್‌ಗಳನ್ನು ತನ್ನ ಇಲಾಖೆಯಡಿ ತಂದು ನಿರ್ವಹಣೆ ಮಾಡುವ ಚಿಂತನೆ ಸರ್ಕಾರಕ್ಕಿದೆಯೇ; (ವಿವರ ಒದಗಿಸುವುದು)

(ಊ) ಮಸೀದಿ, ಚರ್ಚ್‌ಗಳಿಂದ ಬರುವ ಆದಾಯ ಎಷ್ಟು ; ಯಾವ ಯಾವ ಮೂಲಗಳಿಂದ ಆದಾಯ ಬರುತ್ತದೆ ; ಹಾಗೂ ಆದಾಯ ವಿನಿಯೋಗಿಸುತ್ತಿರುವುದು ಹೇಗೆ ? (ವಿವರ ಒದಗಿಸುವುದು )